ಇರತಕ್ಕವರು ಪಶ್ಚಿಮ ಬಂಗಾಳ, ಬಿಹಾರ ಮತ್ತು ಜಾರ್ಖಂಡ್. ಉಳಿದ ಎಲ್ಲಾ ರಾಜ್ಯದವರು ನಮಗಿಂತಲೂ ಮುಂದೆ ಇದ್ದಾರೆ ಎಂಬುದು ಸರ್ವೆ ಮಾಡಿದಾಗ ತಿಳಿದುಬಂದಿದೆ. E-Governance ವಿಚಾರದಲ್ಲಿ ರಾಜ್ಯದಲ್ಲಿ ಸರಿಯಾದ ಒತ್ತು ಕೊಡುತ್ತಿಲ್ಲ. ನಾವು ಮೊದಲನೆಯ ಸ್ಥಾನದಲ್ಲಿ ಇರಬೇಕಾಗಿತ್ತು. ಆದರೆ, ಇಲ್ಲ.

**ಅಧ್ಯಕ್ಷರು:** ಇದರ ಬಗ್ಗೆ ಅರ್ಧಗಂಟೆ ಚರ್ಚೆಗೆ ಅವಕಾಶ ಕೊಟ್ಟಿದ್ದೇನೆ. ಆಗ ಮಾತನಾಡಿ.

**ಶ್ರೀ ದಿನೇಶ್ ಆರ್.ಗುಂಡೂರಾವ್:** ಇದು ಮುಖ್ಯವಾದ ವಿಚಾರ. ಮಾಹಿತಿ ತಂತ್ರಜ್ಞಾನಕ್ಕೆ ಮೂಲವಾಗಿರುವ ರಾಜ್ಯದಲ್ಲಿ ನಾವು ಹಿಂದುಳಿದಿದ್ದೇವೆಂದರೆ ಇದರ ಬಗ್ಗೆ ಸರ್ಕಾರ ಗಮನ ಕೊಡುತ್ತಿಲ್ಲವೆಂದು ಆಯಿತು. ಆದ್ದರಿಂದ ದಯವಿಟ್ಟು ಸರ್ಕಾರ ಇದಕ್ಕೆ ಹೆಚ್ಚು ಒತ್ತುಕೊಟ್ಟು ಎಲ್ಲಾ ಹಂತದಲ್ಲೂ ಇದನ್ನು ಹಾಕಲು ಪ್ರಾಮಾಣಿಕ ಪ್ರಯತ್ನ ಮಾಡಬೇಕು. ಇಲ್ಲಿ ಕೇವಲ ಕಂಪ್ಯೂಟರೀಕರಣ ಮಾತ್ರವಲ್ಲ, ಆಡಳಿತ ಸುಧಾರಣೆ ಸಹ ಮಾಡಬೇಕು.

**ಅಧ್ಯಕ್ಷರು:** ಇದರ ಬಗ್ಗೆ ಅರ್ಧಗಂಟೆ ಚರ್ಚೆಗೆ ಕೊಡುತ್ತೇನೆ. ಆಗ ತಾವು ಮಾತನಾಡಿ. ಈಗ ಪ್ರಶ್ನೋತ್ತರ ಮುಗಿಯಿತು. ಇನ್ನು ಲಿಖಿತ ಮೂಲಕ ಉತ್ತರಿಸುವ ಪ್ರಶ್ನೆಗಳು.

**ಆ) ಚುಕ್ಕೆ ಗುರುತಿಲ್ಲದ ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡಲಾದ ಉತ್ತರಗಳು**

**ಶ್ರೀ ಎಸ್.ಸುರೇಶ್‌ಕುಮಾರ್, ಕಾನೂನು ಮತ್ತು ಸಂಸದೀಯ ಸಚಿವರು:** ಮಾನ್ಯ ಅಧ್ಯಕ್ಷರೆ ಚುಕ್ಕೆ ಗುರುತಿಲ್ಲದ ಪ್ರಶ್ನೆಗಳ 4ನೇ ಪಟ್ಟಿಯಲ್ಲಿರುವ 119 ಪ್ರಶ್ನೆಗಳ ಪೈಕಿ 90 ಪ್ರಶ್ನೆಗಳಿಗೆ ಲಿಖಿತ ಮೂಲಕ ನೀಡುವ ಉತ್ತರಗಳನ್ನು ಸಭೆಯ ಮುಂದೆ ಮಂಡಿಸುತ್ತೇನೆ.

**ಅಧ್ಯಕ್ಷರು:** ಮಂಡಿಸಲಾಯಿತು.

**ಅನುಬಂಧ–1**

**3. ಸಭೆಯ ಮುಂದಿಡಲಾದ ಕಾಗದ ಪತ್ರಗಳು:**

**I. ಶ್ರೀ ಬಿ.ಎಸ್.ಯಡಿಯೂರಪ್ಪ, ಮಾನ್ಯ ಮುಖ್ಯಮಂತ್ರಿಗಳು:** ಮಾನ್ಯ ಅಧ್ಯಕ್ಷರೆ, **1957ರ ಕರ್ನಾಟಕ ಮಾರಾಟ ತೆರಿಗೆ ಕಾಯ್ದೆಯ ಪ್ರಕರಣ 39ರ ಮೇರೆಗೆ:**

ಕರ್ನಾಟಕ ರಾಜ್ಯದಲ್ಲಿ ಮೀನುಗಾರಿಕೆಗೆ ಸಂಬಂಧಪಟ್ಟಂತೆ ಮೀನುಗಾರರು ಮೀನುಗಾರಿಕೆ ಚಟುವಟಿಕೆಗಳಿಗೆ ಬಳಸುವ ಡೀಸೆಲ್ ಮೇಲಿನ ಮಾರಾಟ ತೆರಿಗೆಯನ್ನು ದಿನಾಂಕ 01.04.2009ರಿಂದ ಜಾರಿಗೆ ಬರುವಂತೆ ವಿನಾಯಿತಿ ನೀಡಿ **ದಿನಾಂಕ 30.03.2009ರಂದು** ಹೊರಡಿಸಲಾದ **ಎಫ್‌ಡಿ/63/ಸಿಎಸ್‌ಎಲ್/2009(1)** ನೇ ಸಂಖ್ಯೆಯ ಅಧಿಸೂಚನೆಯನ್ನು ಮಂಡಿಸುತ್ತೇನೆ.